ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ ನೃಪತುಂಗ ರಸ್ತೆ ಬೆಂಗಳೂರು-01

ಸಂಖ್ಯೆ: ಸಿ5(8)ನಿ.ಮಾ 20/2017-18 ದಿನಾಂಕ25..10.2017

**ಅತೀ ಜರೂರು**

ಸಾರ್ವಜನಿಕ ಶಿಕ್ಷಣ ಇಲಾಖೆಯ
ಬೆಂಗಳೂರು ಮತ್ತು ಮೈಸೂರು ವಿಭಾಗದ
ಜಿಲ್ಲಾ ಉಪ ನಿರ್ದೇಶಕರು(ಆಡಳಿತ)

ಮಾನ್ಯರೆ,

ವಿಷಯ: 2018 ನೇ ಸಾಲಿನಲ್ಲಿ ದಿನಾಂಕ: 01.01.2018 ರಿಂದ ದಿನಾಂಕ: 31.12.2018 ರ ಅವಧಿಯಲ್ಲಿ 60 ವರ್ಷ ವಯೋಮಿತಿ ಪೂರೈಸಿ ನಿವೃತ್ತರಾಗಲಿರುವ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೋಧಕೇತರ ವೃಂದದ ಅಧಿಕಾರಿಗಳು/ ನೌಕರರ ಪಟ್ಟಿ ಪ್ರಕಟಿಸುವ ಬಗ್ಗೆ.

******

2018 ನೇ ವರ್ಷದಲ್ಲಿ (ದಿನಾಂಕ:01.01.2018 ರಿಂದ 31.12.2018ರ ಅವಧಿಯಲ್ಲಿ) 60 ವರ್ಷ ವಯೋಮಿತಿ ಪೂರೈಸಿ ಸರ್ಕಾರಿ ಸೇವೆಯಿಂದ ನಿವೃತ್ತರಾಗಲಿರುವ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೋಧಕೇತರ ವೃಂದದ ಗ್ರೂಪ್ ಬಿ,ಸಿ ಮತ್ತು ಗ್ರೂಪ್ ಡಿ ಅಧಿಕಾರಿ/ನೌಕರರ ನಿವೃತ್ತಿ ಪಟ್ಟಿಯನ್ನು ಈ ಕಛೇರಿ ಹಂತದಲ್ಲಿ ಪ್ರಕಟಿಸಬೇಕಾಗಿರುತ್ತದೆ.

ಈ ಹಿನ್ನಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗಗಳ ವ್ಯಾಪ್ತಿಯ ಸರ್ಕಾರಿ ಪ್ರೌಢ ಶಾಲೆ/ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಮತ್ತು ವಿವಿಧ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಾಂಕ: 01.01.2018 ರಿಂದ ದಿನಾಂಕ: 31.12.2018 ರೊಳಗೆ ವಯೋ ನಿವೃತ್ತಿ ಹೊಂದಲಿರುವ ಬೋಧಕೇತರ ವೃಂದದ ಅಧಿಕಾರಿಗಳು/ನೌಕರರು, ಪತ್ರಾಂಕಿತ ಸಹಾಯಕರು, ಸಹಾಯಕ ನಿರ್ದೇಶಕರು/ಪತ್ರಾಂಕಿತ ವ್ಯವಸ್ಥಾಪಕರು, ಲೆಕ್ಕಾಧೀಕ್ಷಕರು, ಅಧೀಕ್ಷಕರು, ಪ್ರಥಮ ದರ್ಜೆ ಸಹಾಯಕರು, ಶೀಘ್ರಲಿಪಿಗಾರರು, ದ್ವಿತೀಯ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕ ಸಹಿತ ಬೆರಳಚ್ಚುಗಾರರು, ಬೆರಳಚ್ಚುಗಾರರು, ವಾಹನ ಚಾಲಕರು, ಪರಿಚಾರಕರು/ಪ್ರಯೋಗಶಾಲಾ ಸಹಾಯಕರು, ಗ್ರೂಪ್ 'ಡಿ' ನೌಕರರು ಇವರ ವಿವರಗಳನ್ನು ನೌಕರರ ಸೇವಾ ಪುಸ್ತಕವನ್ನು ಪರಿಶೀಲಿಸಿ, ಕೆಳಕಂಡ ನಮೂನೆಯಲ್ಲಿ ಭರ್ತಿ ಮಾಡಿ ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರೌಢ ಶಾಲೆ/ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಮತ್ತು ವಿವಿಧ ಕಛೇರಿಗಳಲ್ಲಿನ ಕ್ರೋಢೀಕೃತ ಮಾಹಿತಿಯನ್ನು ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ದಿನಾಂಕ: 20.11.2017 ರೊಳಗೆ ತಪ್ಪದೆ ಶ್ರೀಮತಿ ಚಂದ್ರಕಲಾ, ಸಹಾಯಕ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01 ಇವರ ವಿಳಾಸಕ್ಕೆ ಕಳುಹಿಸಲು ತಿಳಿಸಿದೆ.

| ಕ್ರಸಂ | ಅಧಿಕಾರಿ/ನೌಕರರ ಹೆಸರು ಮತ್ತು ಕಛೇರಿ ವಿಳಾಸ | ವೃಂದ | ಜನ್ಮ ದಿನಾಂಕ | ಸೇವೆಗೆ ಸೇರಿದ ದಿನಾಂಕ | ವಯೋನಿವೃತ್ತಿ ಹೊಂದಲಿರುವ ದಿನಾಂಕ | ಷರಾ |
|---|---|---|---|---|---|---|
| | | | | | | |

ನಿವೃತ್ತರಾಗುವವರು ಯಾರೂ ಇಲ್ಲದ ಪಕ್ಷದಲ್ಲಿ **"ಶೂನ್ಯವರದಿ"** ಎಂದು ಸಲ್ಲಿಸತಕ್ಕದ್ದು. ಸಾಫ್ಟ್ ಕಾಪಿಯನ್ನು obcpi2016@gmail.com ಇ-ಮೇಲ್ ವಿಳಾಸಕ್ಕೆ ಕಳುಹಿಸಲು ತಿಳಿಸಿದೆ. ತಪ್ಪಿಲ್ಲದ ಸರಿಯಾದ ಮಾಹಿತಿಯನ್ನು ಸಲ್ಲಿಸುವಂತೆ ಕೋರಿದೆ.

ತಮ್ಮ ನಂಬುಗೆಯ

[ಎಸ್. ಕಾತ್ಯಾಯಿನಿದೇವಿ]

ಜಂಟಿ ನಿರ್ದೇಶಕರು(ಆಡಳಿತ)

ಪ್ರತಿಯನ್ನು:

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, 100 ಅಡಿ ರಿಂಗ್ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಮೂರನೇ ಹಂತ, ಬೆಂಗಳೂರು.
3. ನಿರ್ದೇಶಕರು, ಪಠ್ಯಪುಸ್ತಕ ಸಂಘ, 100 ಅಡಿ ರಿಂಗ್ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಮೂರನೇ ಹಂತ, ಬೆಂಗಳೂರು.
4. ನಿರ್ದೇಶಕರು,ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5. ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ನೃಪತುಂಗ ರಸ್ತೆ, ಬೆಂಗಳೂರು.-01.
6. ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು.
7. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
8. ಸಹ ನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕೆ.ಜಿ.ರಸ್ತೆ, ಬೆಂಗಳೂರು-02.
9. ಪ್ರಾಂಶುಪಾಲರು, ಸಾರ್ವಜನಿಕ ಶಿಕ್ಷಣ ಇಲಾಖೆ, ಸಿ.ಟಿ.ಇ ಮೈಸೂರು ಮಂಗಳೂರು, ಚಿತ್ರದುರ್ಗ.
10. ಉಪನಿರ್ದೇಶಕರು(ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ, ಡಯಟ್ ಬೆಂಗಳೂರು ಮತ್ತು ಮೈಸೂರು ವಿಭಾಗ
11. ಕಛೇರಿ ಪ್ರತಿ.